


# ಉನ್ನತ ಶಿಕ್ಷಣದಲ್ಲಿ ದಾಪುಗಾಲು

ರಾಜ್ಯವೊಂದರ ಉನ್ನತಿಯನ್ನು ಸೂಚಿಸುವ ಬಹುಮುಖ್ಯ ಅಂಶಗಳಲ್ಲಿ ಉನ್ನತ ಶಿಕ್ಷಣ ಕ್ಷೇತ್ರ ಅತ್ಯಂತ ಮಹತ್ವದ್ದು. ಕಳೆದ ನಾಲ್ಕು ವರ್ಷಗಳಲ್ಲಿ ಕರ್ನಾಟಕ ರಾಜ್ಯವು ಉನ್ನತ ಶಿಕ್ಷಣದಲ್ಲಿ ಪ್ರಗತಿಯತ್ತ ದಾಪುಗಾಲಿಟ್ಟಿದೆ. ಕರ್ನಾಟಕದ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಲ್ಲಿ ಅತ್ಯುನ್ನತ ಸಾಧನೆಗಳನ್ನು ದಾಖಲಿಸುವ ವಾತಾವರಣ ಸೃಷ್ಟಿಯಾಗಿದೆ. ಹೊರ ರಾಜ್ಯಗಳಿಂದ ಮತ್ತು ವಿದೇಶಗಳಿಂದ ಸಹಸ್ರಾರು ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ರಾಜ್ಯಕ್ಕೆ ಧಾವಿಸಿ ಬರುತ್ತಿದ್ದಾರೆ.

ಉನ್ನತ ಶಿಕ್ಷಣ ಇಲಾಖೆಯ ಪ್ರಮುಖ ಸಾಧನೆಗಳನ್ನು ಹೀಗೆ ಪಟ್ಟಿ ಮಾಡಬಹುದು:

ಡಾ.ಬಿ.ಆರ್.ಅಂಬೇಡ್ಕರ್‌ರವರು ವ್ಯಾಸಂಗ ಮಾಡಿದ ವಿಶ್ವವಿಖ್ಯಾತ ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್ ಮಾದರಿಯಲ್ಲಿ, 'ಡಾ.ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್' ಎಂಬ ಅರ್ಥಶಾಸ್ತ್ರದ ಉನ್ನತ ವ್ಯಾಸಂಗ ಹಾಗೂ ಸಂಶೋಧನಾ ಸಂಸ್ಥೆಗೆ ಬೆಂಗಳೂರಿನಲ್ಲಿ ಶಂಕುಸ್ಥಾಪನೆ ನೆರವೇರಿದೆ. ಇದಕ್ಕಾಗಿ ರೂ.107 ಕೋಟಿ ರೂಪಾಯಿಗಳ ಅನುದಾನವನ್ನು ಒದಗಿಸಲಾಗಿದೆ.

ಹೊಸದಾಗಿ 4 ಇಂಜಿನಿಯರಿಂಗ್ ಕಾಲೇಜುಗಳು ಮಂಜೂರಾಗಿದ್ದು, ಅದರಲ್ಲಿ 3 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಕಾಮಗಾರಿ ಪ್ರಾರಂಭಗೊಂಡಿದೆ. ತಳಕಲ್, ಚಳ್ಳಕೆರೆ, ನರಗುಂದ ಮತ್ತು ಬೀದರ್‌ನಲ್ಲಿ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಕ್ಕೆ ಅನುಮತಿ ದೊರೆತಿದೆ.

ಹಿರಿಮೆ– ಗರಿಮೆ ಯೋಜನೆಯಡಿ 100 ವರ್ಷ ಮತ್ತು 50 ವರ್ಷಗಳನ್ನು ಪೂರ್ಣಗೊಳಿಸಿದ ಉನ್ನತ ಶಿಕ್ಷಣ ಸಂಸ್ಥೆಗಳ ಮೂಲಭೂತ ಅವಶ್ಯಕತೆಗಳನ್ನು ಪೂರೈಸಲು 10 ಕೋಟಿ ರೂ.ಗಳನ್ನು ಹಾಗೂ ಮೈಸೂರು ವಿಶ್ವವಿದ್ಯಾಲಯದ ಶತಮಾನೋತ್ಸವ ಅಂಗವಾಗಿ 50 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ.

ಶಿರಾ, ಹೊಳೆ ಆಲೂರು ಮತ್ತು ಗುನ್ನಾಳದಲ್ಲಿ ಮೂರು ಪಾಲಿಟೆಕ್ನಿಕ್‌ಗಳಿಗೆ ಶಂಕುಸ್ಥಾಪನೆ ಮಾಡಲಾಗಿದೆ. 50 ಕೋಟಿ ರೂ. ವೆಚ್ಚದಲ್ಲಿ ದಾಂಡೇಲಿಯಲ್ಲಿ ರೇಷ್ಮೆ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಲಾಗಿದೆ.

26 ಹೊಸ ಮಹಿಳಾ ಪ್ರಥಮ ದರ್ಜೆ ಕಾಲೇಜುಗಳೂ ಸೇರಿದಂತೆ ಅವಶ್ಯಕತೆ ಆಧರಿಸಿ ಒಟ್ಟು 52 ಹೊಸ ಪ್ರಥಮ ದರ್ಜೆ ಕಾಲೇಜುಗಳನ್ನು ಕಳೆದ ನಾಲ್ಕು ವರ್ಷಗಳಲ್ಲಿ ಪ್ರಾರಂಭಿಸಲಾಗಿದೆ.

ಕಳೆದ ನಾಲ್ಕು ವರ್ಷಗಳಲ್ಲಿ 67 ಕಾಲೇಜುಗಳನ್ನು ನ್ಯಾಕ್ ಮಾನ್ಯತೆ/ ಮರುಮಾನ್ಯತೆಗೆ ಒಳಪಡಿಸಿದ್ದು, ಪ್ರಸ್ತುತ ಒಟ್ಟು 184 ಪ್ರಥಮ ದರ್ಜೆ ಕಾಲೇಜುಗಳು ನ್ಯಾಕ್ ಮಾನ್ಯತೆ/ ಮರುಮಾನ್ಯತೆಗೆ ಒಳಪಟ್ಟಿರುತ್ತವೆ.

ಧಾರವಾಡದಲ್ಲಿ ಐ.ಐ.ಟಿ. ಸ್ಥಾಪನೆಗಾಗಿ 470 ಎಕರೆ ಜಮೀನು ಸರ್ಕಾರ ಮಂಜೂರು ಮಾಡಿ, ಐ.ಐ.ಟಿ ಯನ್ನು ಪ್ರಾರಂಭಿಸಿದೆ.

ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 10 ಎಸ್‌ಸಿ / ಎಸ್‌ಸಿ ಹಾಸ್ಟಲ್, 10 ಸಾಮಾನ್ಯ ಹಾಸ್ಟಲ್ ಹಾಗೂ 3 ವಿದ್ಯಾರ್ಥಿನಿಯರ ಹಾಸ್ಟಲ್‌ಗಳನ್ನು ನಿರ್ಮಿಸಲಾಗಿದೆ. ಪಾಲಿಟೆಕ್ನಿಕ್‌ಗಳಲ್ಲಿ 47 ಎಸ್‌ಸಿ / ಎಸ್‌ಟಿ ಹಾಸ್ಟಲ್‌ಗಳನ್ನು ನಿರ್ಮಿಸಲಾಗಿದೆ.

ಐ.ಎ.ಎಸ್/ ಐ.ಪಿ.ಎಸ್ ಅಕಾಡೆಮಿಗಳ ಮಾದರಿಯಲ್ಲಿ ಉನ್ನತ ಶಿಕ್ಷಣ